ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 23-6-2017

# ಪತ್ರಿಕಾ ಆಮಂತ್ರಣ

1) ರೈತರ ಆದಾಯ ಮತ್ತು ಕಲ್ಯಾಣ ವೃದ್ಧಿಗಾಗಿ ಎರಡು ದಿನಗಳ (24 ಮತ್ತು 25 ಜೂನ್) ರಾಷ್ಟ್ರೀಯ ಕಾರ್ಯಾಗಾರ

ಪ್ರಾಸ್ತಾವಿಕ ಭಾಷಣ:

ಡಾ: ಟಿ. ಎನ್. ಕಮ್ಮರಡಿ,

ಕರ್ನಾಟಕ ಕೃಷಿ ಬೆಲೆ ಆಯೋಗ, ಬೆಂಗಳೂರು

ಭಾಗವಹಿಸಲಿರುವವರು:

ಡಾ: ಅಶೋಕ್ ದಳವಾಯಿ,

ಕೇಂದ್ರ ಕೃಷಿ ಇಲಾಖೆ ಕಾರ್ಯದರ್ಶಿಗಳು, ಹಾಗೂ ರೈತರ ಆದಾಯ ಸಮಿತಿ ಮುಖ್ಯಸ್ಥರು

ವಿ.ಪಿ. ಶರ್ಮ,

ಅಧ್ಯಕ್ಷರು, ಕೇಂದ್ರ ಕೃಷಿ ವೆಚ್ಚ ಮತ್ತು ಬೆಲೆ ಆಯೋಗ

ಸ್ಥಳ: ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆಯ ಅಧ್ಯಯನ ಸಂಸ್ಥೆ( ಐಸೆಕ್)

ನಾಗರಭಾವಿ ವೃತ್ತ, ಬೆಂಗಳೂರು -72.

ದಿನಾಂಕ: 24-6-2017 ಶನಿವಾರ, ಸಮಯ: ಬೆಳಗ್ಗೆ 10-30 ಗಂಟೆಗೆ

# ಪತ್ರಿಕಾ ಪ್ರಕಟಣೆ

## ನೋಟುಗಳ ಅಮಾನ್ಯೀಕರಣ ದೇಶದ ಆರ್ಥಿಕ ಬೆಳವಣಿಗೆಗೆ ಸಹಕಾರಿ ಆಗಿಲ್ಲ- ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು, ಜೂನ್ 23 (ಕರ್ನಾಟಕ ವಾರ್ತೆ)

ನೋಟುಗಳು ಅಮಾನ್ಯೀಕರಣದಿಂದ ದೇಶದ ಆರ್ಥಿಕ ಬೆಳವಣಿಗೆ ಸಹಕಾರಿ ಆಗಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಕರ್ನಾಟಕ ಸರ್ಕಾರ ಸಚಿವಾಲಯ ಸಹಕಾರ ಸಂಘ ವಿಧಾನ ಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಇಂದು ಏರ್ಪಡಿಸಿದ್ದ ನೋಟುಗಳ ಅಮಾನ್ಯೀಕರಣದಿಂದ ಸಹಕಾರ ಸಂಘಗಳ ಮೇಲೆ ಉಂಟಾದ ಪರಿಣಾಮಗಳು ಹಾಗೂ ಸಹಕಾರ ಚಳುವಳಿ ಮತ್ತು ಸರ್ಕಾರಿ ನೌಕರರು ಕುರಿತ ರಾಜ್ಯಮಟ್ಟದ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದ ಅವರು ನೋಟು ಅಮಾನ್ಯೀಕರಣ ಮಾಡುವುದರಿಂದ ಭ್ರಷ್ಟಾಚಾರಕ್ಕೆ ಕಡಿವಾಣ, ಕಪ್ಪುಹಣ ಹೊರತರುವುದು ಹಾಗೂ ಭಯೋತ್ಪಾದಕರಿಗೆ ಸಿಗುತ್ತಿದ್ದ ಹಣಕ್ಕೆ ಕಡಿವಾಣ ಹಾಕುವುದಾಗಿ ದೇಶದ ಪ್ರಧಾನಮಂತ್ರಿ ಅವರು ಭರವಸೆ ನೀಡಿದ್ದರು. ಆದರೆ ಈವರೆಗೆ ಇವು ಯಾವುವೂ ಸಾಕಾರಗೊಂಡಿಲ್ಲ. ಕಪ್ಪು ಹಣ ಹೊಂದಿದ್ದವರು ಚೆನ್ನಾಗಿಯೇ ಇದ್ದಾರೆ ಆದರೆ ದೇಶದ ಬಡವರು, ಕೂಲಿಕಾರ್ಮಿಕರು ನೋಟು ಅಮಾನ್ಯೀಕರಣದಿಂದಾಗಿ ತಾವು ದುಡಿದ ಹಣವನ್ನು ಬ್ಯಾಂಕುಗಳಿಂದ ಪಡೆಯಲು ಇನ್ನೂ ತೊಂದರೆ ಪಡುತ್ತಿದ್ದಾರೆ ಎಂದು ಮುಖ್ಯಮಂತ್ರಿ ಅವರು ಮಾತನಾಡಿದರು.

ನೋಟುಗಳ ಅಮಾನ್ಯೀಕರಣಕ್ಕೆ ನಮ್ಮ ವಿರೋಧವಿಲ್ಲ ಆದರೆ ನೋಟು ಅಮಾನ್ಯೀಕರಣ ಮಾಡುವುದರಿಂದಾಗುವ ಪರಿಣಾಮಗಳ ಬಗ್ಗೆ ಕೇಂದ್ರ ಸರ್ಕಾರ ಪೂರ್ವ ಸಿದ್ದತೆ ಮಾಡಿಕೊಳ್ಳದೆ ದೇಶದ ಬಡವರು, ಕೂಲಿಕಾರ್ಮಿಕರು ತೊಂದರೆ ಸಿಲುಕುವಂತ ಪರಿಸ್ಥಿತಿ ನಿರ್ಮಾಣ ಮಾಡಿತು. ನೋಟು ಅಮಾನ್ಯೀಕರಣದಂತಹ ಯೋಜನೆಯನ್ನು ರಾಜಕೀಯಕೋಸ್ಕರ ಜಾರಿಗೆ ತರಲಾಯಿತು ಎಂದು ಅವರು ತಿಳಿಸಿದರು.

ನೋಟು ಅಮಾನ್ಯೀಕರಣ ಮಾಡಿದ ಮೇಲೆ ದೇಶದಲ್ಲಿನ ಭ್ರಷ್ಠಾಚಾರ, ಕಪ್ಪು ಹಣ ಸಂಪೂರ್ಣವಾಗಿ ನಿರ್ಮೂಲನೆಯಾಗಿಲ್ಲ ಇಂದಿಗೂ ಕೂಡ ನಾವು ಕೂಡಿಟ್ಟ ಹಣ ಪಡೆಯಲು ಎಟಿಎಂಗಳಿಗೆ ಹೋದಲ್ಲಿ ಹಣ ಇಲ್ಲ ಎಂದು ಬೋರ್ಡು ಹಾಕಿರುತ್ತಾರೆ. ಇದರಿಂದ ಬಡವರಿಗೆ ಅನಾನುಕೂಲವಾಗಲಿದೆ ಎಂದರು.

'ಸಹಕಾರಿ ಶಿಖರ' ಸ್ಮರಣ ಸಂಚಿಕೆ ಬಿಡುಗಡೆ ಮಾಡಿ ಮಾತನಾಡಿದ ಇಂಧನ ಸಚಿವ ಡಿ.ಕೆ. ಶಿವಕುಮಾರ್ ಅವರು ಸಹಕಾರ ಸಂಘಗಳು ಅಭಿವೃದ್ಧಿಯಾದಲ್ಲಿ ರೈತರ ಅಭಿವೃದ್ಧಿ ಸಾಧ್ಯ, ಸಹಕಾರಿ ಸಂಘಗಳು ರಾಜ್ಯದ ಅಭಿವೃದ್ಧಿಗೆ ತಮ್ಮದೇ ಕೊಡುಗೆ ನೀಡಿವೆ ಎಂದು ಹೇಳಿದರು.

ಕರ್ನಾಟಕ ಸರ್ಕಾರ ಸಚಿವಾಲಯ ಸಹಕಾರ ಸಂಘದ ಅಧ್ಯಕ್ಷರಾದ ಯು.ಡಿ. ನರಸಿಂಹಯ್ಯ ಅವರು ಪ್ರಸ್ತಾವಿಕವಾಗಿ ಮಾತನಾಡಿದರು.

ಶಾಸಕರುಗಳಾದ ಎಸ್.ಟಿ. ಸೋಮಶೇಖರ್, ಮುನಿರತ್ನ, ಭೈರತಿ ಬಸವರಾಜು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಬಿ.ಪಿ. ಮಂಜೇಗೌಡ, ಸಹಕಾರ ಸಂಘಗಳ ನಿವೃತ್ತ ಅಪರ ಪ್ರತಿಬಂಧಕ ಸಿ.ಎಸ್. ಪರಶಿವಮೂರ್ಗತಿ, ಸಂಘದ ಪದಾಧಿಕಾರಿಗಳು ಸಚಿವಾಲಯದ ಅಧಿಕಾರಿಗಳೂ ನೌಕರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಕೇಬಲ್ ಟಿ.ವಿ. ನೆಟ್‌ವರ್ಕ್ ಕಾಯಿದೆ ಕುರಿತು ಒಂದು ದಿನದ ಕಾರ್ಯಾಗಾರ

ಬೆಂಗಳೂರು, ಜೂನ್ 23 (ಕರ್ನಾಟಕ ವಾರ್ತೆ)

ನ್ಯಾಯಾಲಯದ ಆದೇಶದಂತೆ ಜಿಲ್ಲಾ ಮಟ್ಟದಲ್ಲಿ ಕೇಬಲ್ ಟಿ.ವಿ. ಕುರಿತ ದೂರುಗಳ ಸಮಿತಿಗಳನ್ನು ರಚಿಸಿರುವುದು ಹಾಗೂ ಸಾರ್ವಜನಿಕರ ದೂರುಗಳಿಗೆ ಸ್ಪಂದಿಸುವಲ್ಲಿ ಕರ್ನಾಟಕ ರಾಜ್ಯ ದೇಶದಲ್ಲೇ ಮೊದಲ ಸ್ಥಾನದಲ್ಲಿದೆ ಎಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ  ಎಂ. ಲಕ್ಷ್ಮೀನಾರಾಯಣ್ ಅವರು ತಿಳಿಸಿದರು.

ಇಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕೇಂದ್ರ ಕಛೇರಿ ವಾರ್ತಾ ಸೌಧದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ವಾರ್ತಾಧಿಕಾರಿಗಳಿಗೆ ಕೇಬಲ್ ಟಿ.ವಿ. ನೆಟ್‌ವರ್ಕ್ ಕಾಯಿದೆ ಕುರಿತು ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು ದೇಶದಲ್ಲೇ ಇತರೆ ರಾಜ್ಯಗಳ ಸಾರ್ವಜನಿಕ ಸಂಪರ್ಕ ಇಲಾಖೆಗಳಿಗೆ ಹೋಲಿಸಿ ನೋಡಿದಲ್ಲಿ ನಮ್ಮ ರಾಜ್ಯದ ಸಾರ್ವಜನಿಕ ಸಂಪರ್ಕ ಇಲಾಖೆ ಅತ್ಯುತ್ತಮವಾಗಿದ್ದು ವಿನೂತನ ಕಾರ್ಯಗಳಿಂದ ಗಮನ ಸೆಳೆಯುತ್ತದೆ.

ಇಂದಿನ ಮಾಧ್ಯಮಗಳಲ್ಲಿ ಟಿ.ವಿ. ಮಾಧ್ಯಮ ಶೇ. 80 ಹಾಗೂ ಮುದ್ರಣ ಮಾಧ್ಯಮ ಶೇ. 20 ರಷ್ಟು ಜನರನ್ನು ತಲುಪುತ್ತಿವೆ ಎಂದು ಸಮೀಕ್ಷೆ ಹೇಳುತ್ತದೆ ಹಾಗಾಗಿ ಅತ್ಯಂತ ಪ್ರಭಾವಶಾಲಿ ಮಾಧ್ಯಮವಾಗಿರುವ ಟಿ.ವಿ. ಕುರಿತು ಸಾರ್ವಜನಿಕರು ಆಕ್ಷೇಪಾರ್ಹ ಸುದ್ದಿ ಅಥವಾ ಕಾರ್ಯಕ್ರಮಗಳ ಕುರಿತು ಜಿಲ್ಲಾ ಮಟ್ಟದ ಸಮಿತಿಗಳಿಗೆ ದೂರು ನೀಡಬಹುದಾಗಿದ್ದು ಈ ಸಮಿತಿಯಲ್ಲಿ ಜಿಲ್ಲಾಧಿಕಾರಿಗಳು ಅಧ್ಯಕ್ಷರಾಗಿರುತ್ತಾರೆ, ಜಿಲ್ಲಾ ವಾರ್ತಾಧಿಕಾರಿಗಳು ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ.

ಸಾರ್ವಜನಿಕರ ದೂರುಗಳಿಗೆ ಸ್ಪಂದಿಸಲು ಹಾಗೂ ಪರಾಮರ್ಶಿಸಲು ಸರ್ಕಾರಿ ನೌಕರರಾದ ನಮಗೆಲ್ಲಾ ಕಾನೂನುಗಳ ಅರಿವಿರಬೇಕು ಹಾಗೂ ಕಾಲ ಕಾಲಕ್ಕೆ ಬದಲಾಗುವ ಕಾನೂನುಗಳ ಬಗ್ಗೆ ತಿಳಿದುಕೊಳ್ಳಬೇಕು ಎಂದು ಅಧಿಕಾರಿಗಳು ಕಿವಿಮಾತು ಹೇಳಿದರು.

ಜಿಲ್ಲಾ ಸಮಿತಿಗಳು ರಾಜ್ಯ ಸಮಿತಿಗೆ ಕಾಲ ಕಾಲಕ್ಕೆ ಬಂದ ದೂರುಗಳ ವಿಲೇವಾರಿ ಮಾಹಿತಿ ಹಾಗೂ ಕೇಂದ್ರ ಸರ್ಕಾರಕ್ಕೆ ರಾಜ್ಯ ಸರ್ಕಾರ ಕೇಬಲ್ ಕುರಿತು ಗಮನ ಸೆಳೆಯಲು ಮಾಹಿತಿಯನ್ನು ಹಂಚಿಕೊಳ್ಳಬೇಕು. ಹಾಗಿದ್ದಾಗ ಮಾತ್ರ ಉತ್ತಮ ಕಾನೂನುಗಳನ್ನು ರೂಪಿಸಲು ಸಾಧ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್.ಆರ್. ವಿಶುಕುಮಾರ್, ಉಪ ನಿರ್ದೇಶಕರಾದ ಹೆಚ್.ಬಿ. ದಿನೇಶ್, ಎ.ಆರ್. ಪ್ರಕಾಶ್, ದೇವರಾಜಯ್ಯ ಸೇರಿದಂತೆ ಅನೇಕ ಉನ್ನತಾಧಿಕಾರಿಗಳು ಉಪಸ್ಥಿತರಿದ್ದರು.

ದೂರದರ್ಶನದ ನಿರಂಜನ್ ಅವರು ಕೇಬಲ್ ಟಿ.ವಿ. ನೆಟ್‌ವರ್ಕ್ ಕಾಯಿದೆ ಕುರಿತು ಉಪನ್ಯಾಸ ನೀಡಿದರು.

## ರೈತರ ಆದಾಯ ಮತ್ತು ಕಲ್ಯಾಣ ವೃದ್ಧಿಗಾಗಿ ಎರಡು ದಿನಗಳ ರಾಷ್ಟ್ರೀಯ ಕಾರ್ಯಾಗಾರ

ಬೆಂಗಳೂರು, ಜೂನ್ 23 (ಕರ್ನಾಟಕ ವಾರ್ತೆ)

ಕರ್ನಾಟಕ ಕೃಷಿ ಬೆಲೆ ಆಯೋಗ ಪ್ರಾಯೋಗಿಕವಾಗಿ ರಾಜ್ಯದ 8 ಜಿಲ್ಲೆಗಳಲ್ಲಿ ರೈತರ ಆದಾಯ ಮತ್ತು ಕಲ್ಯಾಣ ವೃದ್ಧಿ ವಿಚಾರಕ್ಕೆ ಸಂಬಂಧಿಸಿದ ಕಾರ್ಯಕ್ರಮ ಅನುಷ್ಠಾನಗೊಳಿಸಲು ರಾಷ್ಟ್ರಮಟ್ಟದ ಚಿಂತನೆಯನ್ನು ನಡೆಸಲು ಎರಡು ದಿನಗಳ ರಾಷ್ಟ್ರೀಯ ಕಾರ್ಯಾಗಾರವನ್ನು ಹಮ್ಮಿಕೊಂಡಿದೆ.

ಈ ಕಾರ್ಯಾಗಾರದಲ್ಲಿ ಕೇಂದ್ರ ಸರ್ಕಾರದ ಕೃಷಿ ಇಲಾಖೆ ಕಾರ್ಯದರ್ಶಿಗಳು ಹಾಗೂ ರೈತರ ಆದಾಯ ಸಮಿತಿಯ ಮುಖ್ಯಸ್ಥರಾದ ಡಾ: ಅಶೋಕ್ ದಳವಾಯಿ, ಕೇಂದ್ರ "ಕೃಷಿ ವೆಚ್ಚ ಮತ್ತು ಬೆಲೆ ಆಯೋಗ" (ಸಿಎಸಿಪಿ) ಅಧ್ಯಕ್ಷರಾದ ವಿ.ಪಿ. ಶರ್ಮ, ರೈತ ಮುಖಂಡ ವಿಜಯ ಜಾವಂಥಿಯ, ನಬಾರ್ಡ್ ಮುಖ್ಯಸ್ಥರು, ರೈತ ಪ್ರತಿನಿಧಿಗಳು, ತಜ್ಞರು, ಇಲಾಖಾಧಿಕಾರಿಗಳು ಭಾಗವಹಿಸುವರು.

ಕೃಷಿ ಬೆಲೆ ಆಯೋಗವು ರಾಜ್ಯದ ರೈತರ ಆದಾಯದ ಬಗ್ಗೆ ವಾಸ್ತವಾಂಶದ ಬೆಳಕನ್ನು ಚೆಲ್ಲುವ ನಿಟ್ಟಿನಲ್ಲಿ ಕೈಗೊಂಡಿದ್ದ ಅಧ್ಯಯನ ಫಲಿತಾಂಶಗಳನ್ನು ಚರ್ಚಿಸಲಾಗುವುದು. ಕೃಷಿ ಬೆಲೆ ಆಯೋಗದ ಅಧ್ಯಕ್ಷ ಡಾ: ಟಿ.ಎನ್. ಪ್ರಕಾಶ್ ಕಮ್ಮರಡಿ ಅವರು ಪ್ರಾಸ್ತಾವಿಕ ಭಾಷಣ ಮಾಡಲಿದ್ದು, ಐಸೆಕ್ ಸಂಸ್ಥೆಯ ನಿರ್ದೇಶಕ ಡಾ: ಎಂ.ಜಿ. ಚಂದ್ರಕಾಂತ್ ಅವರು ಅಧ್ಯಕ್ಷತೆ ವಹಿಸಲಿರುವರೆಂದು ಕೃಷಿ ಬೆಲೆ ಆಯೋಗದ ಪ್ರಕಟಣೆ ತಿಳಿಸಿದೆ.

## ಜಿ.ಎಸ್.ಟಿ. ಚಲನಚಿತ್ರೋದ್ಯಮ ವಿಶ್ಲೇಷಣೆ

ಬೆಂಗಳೂರು, ಜೂನ್ 23 (ಕರ್ನಾಟಕ ವಾರ್ತೆ)

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾಣಿಜ್ಯ ತೆರಿಗೆ ಇಲಾಖೆ, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಹಾಗೂ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾ ಸಂಸ್ಥೆ (ಎಫ್.ಕೆ.ಸಿ.ಸಿ.ಐ) ಜಿ.ಎಸ್.ಟಿ. ಮತ್ತು ಚಲನಚಿತ್ರೋದ್ಯಮ: ಒಂದು ವಿಶ್ಲೇಷಣೆ ಎಂದು ಕಾರ್ಯಕ್ರಮ ಏರ್ಪಡಿಸಿವೆ.

ಕಾರ್ಯಕ್ರಮ ಜೂನ್ 27 ರಂದು ಬೆಳಿಗ್ಗೆ 10–30 ಗಂಟೆಗೆ ಮಹದೇವ ದೇಸಾಯಿ ಸಭಾಂಗಣ, ಗಾಂಧಿ ಭವನ, ಕುಮಾರ ಪಾರ್ಕ್ ರಸ್ತೆ, ಬೆಂಗಳೂರು ಇಲ್ಲಿ ನಡೆಯಲಿದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್.ಆರ್. ವಿಶುಕುಮಾರ್ ಅವರು ಪ್ರಾಸ್ತಾವಿಕ ನುಡಿಯುವರು. ಸಮಾರಂಭದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಎಸ್.ವಿ. ರಾಜೇಂದ್ರಸಿಂಗ್ ಬಾಬು ವಹಿಸುವರು.

ಬಿ.ಟಿ. ಮನೋಹರ್, ಅಧ್ಯಕ್ಷರು, ರಾಜ್ಯ ತೆರಿಗೆ ಸಮಿತಿ ಹಾಗೂ ಟೀಮ್ ಜಿ.ಎಸ್.ಟಿ. ಎಫ್.ಕೆ.ಸಿ.ಸಿ.ಐ. ಅವರು ವಿಷಯ ಪ್ರವೇಶ ನುಡಿಯುವರು. ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಅಧ್ಯಕ್ಷ ಸಾ.ರಾ. ಗೋವಿಂದು ಅವರು ಚಿತ್ರೋದ್ಯಮದ ದೃಷ್ಟಿಯಲ್ಲಿ ಜಿ.ಎಸ್.ಟಿ. ಕುರಿತು ಮಾತನಾಡುವರು. ಕಾರ್ಯಕ್ರಮದ ವಿಶ್ಲೇಷಣೆಯನ್ನು ವಾಣಿಜ್ಯ ತೆರಿಗೆ ಇಲಾಖೆಯ ಜಂಟಿ ಆಯುಕ್ತ ಕೆ.ಎಸ್. ಬಸವರಾಜ್, ಡಾ: ಬಿ.ವಿ. ಮುರಳಿಕೃಷ್ಣ, ಕೆ. ರಾಮನ್, ವಿಷಯ ತಜ್ಞರು ಹಾಗೂ ಚಾರ್ಟರ್ಡ್ ಅಕೌಂಟೆಂಟ್ ವಿವೇಕ್ ಮಲ್ಯ ಅವರು ಮಾಡುವರು.

ಸಮಾರಂಭದಲ್ಲಿ ಕರ್ನಾಟಕ ಚಲನಚಿತ್ರ ನಿರ್ಮಾಪಕರ, ನಿರ್ದೇಶಕರ ಕಲಾವಿದರ ಸಂಘಗಳು ಭಾಗವಹಿಸಲಿವೆ ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿ ರಿಜಿಸ್ಟ್ರಾರ್ ಹೆಚ್.ಬಿ. ದಿನೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# **ಆನ್‌ಲೈನ್ ಇಂಟರಾಕ್ಟೀವ್ ಕೌನ್ಸಲಿಂಗ್**

**ಬೆಂಗಳೂರು, ಜೂನ್ 23 (ಕರ್ನಾಟಕ ವಾರ್ತೆ)**

2017–18ನೇ ಸಾಲಿಗೆ ರಾಜ್ಯದ ಹಗಲು ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳಿಗೆ ಪ್ರಸಕ್ತ ಸಾಲಿನಿಂದ **ಆನ್‌ಲೈನ್ ಇಂಟರಾಕ್ಟೀವ್ ಕೌನ್ಸಲಿಂಗ್** ಮೂಲಕ ಕರ್ನಾಟಕದಲ್ಲಿ 02 ವರ್ಷಗಳ ಐ.ಟಿ.ಐ ಉತ್ತೀರ್ಣ ಹೊಂದಿದ ವಿದ್ಯಾರ್ಥಿಗಳಿಗೆ ಲ್ಯಾಟರಲ್ ಎಂಟ್ರಿ ಸ್ಕೀಂ ಮುಖಾಂತರ 2ನೇ ವರ್ಷ / 3ನೇ ಸೆಮಿಸ್ಟರ್ ಡಿಪ್ಲೋಮಾ ಕೋರ್ಸಿಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

(ಅ) **ಅರ್ಜಿ ಪಡೆಯುವ ವಿಧಾನ:**

2ನೇ ವರ್ಷ / 3ನೇ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಬಯಸುವ ಅಭ್ಯರ್ಥಿಗಳು **ದಿನಾಂಕ: 22–06–2017** ರಿಂದ **27–06–2017** ರವರೆಗೆ ಅರ್ಜಿ ನಮೂನೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಅಧಿಕೃತ ವೆಬ್‌ಸೈಟ್‌ಗಳ ಮೂಲಕ www.dte.kar.nic.in & www.kea.kar.nic.in **ಡೌನ್‌ಲೋಡ್** ಮಾಡಿಕೊಳ್ಳುವುದು.

ನಂತರ, ಕರ್ನಾಟಕ ರಾಜ್ಯದ ಯಾವುದೇ **ಭಾರತೀಯ ಸ್ಟೇಟ್ ಬ್ಯಾಂಕ್** ಶಾಖೆಗಳಲ್ಲಿ ಈ ಕೆಳಕಂಡ ಕೋಷ್ಠಕದಲ್ಲಿನ ಖಾತೆಗೆ ಪಾವತಿಸಿ BANK CHALLAN (counterfoil) ನ್ನು ಪಡೆದು ಸಮೀಪದ 121 ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್ "ಆನ್‌ಲೈನ್ ಅರ್ಜಿಗಳ ಭರ್ತಿ/ದಾಖಲೆಗಳ ಪರಿಶೀಲನಾ ಕೇಂದ್ರ" (Online Application Submission / Document Verification Center)"ಗಳಲ್ಲಿ ಎಲ್ಲಾ ಮೂಲ ದಾಖಲೆಗಳ ಪರಿಶೀಲನೆ ಮಾಡಿಸಿ, ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ, **ಸಲ್ಲಿಸಿದ ಅರ್ಜಿಯ ಮುದ್ರಿತ ಪ್ರತಿ ಹಾಗೂ** ಸ್ವೀಕೃತಿಯನ್ನು (Acknowledgement Card)**ಯನ್ನು ಪಡೆಯತಕ್ಕದ್ದು.**

| *ಬ್ಯಾಂಕ್* | *ಖಾತೆಯ ಹೆಸರು* | *ಖಾತೆ ಸಂ.* | *IFSC Code* |
|---|---|---|---|
| **ಭಾರತೀಯ ಸ್ಟೇಟ್ ಬ್ಯಾಂಕ್, ಮಲ್ಲೇಶ್ವರಂ ಶಾಖೆ, ಬೆಂಗಳೂರು** | **'ED-KEA-DCET-2017 Application Fee Collection Account** | **36843662415** | **SBIN0007080** |

(ಆ) **ಅರ್ಜಿ ನೊಂದಣಿ ಶುಲ್ಕ:**

[] **100/-** (ಸಾಮಾನ್ಯ, 2ಎ, 2ಬಿ, 3ಎ, 3ಬಿ ವರ್ಗದ ಅಭ್ಯರ್ಥಿಗಳಿಗೆ)

[] **50/-** (ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ–1ರ ಅಭ್ಯರ್ಥಿಗಳಿಗೆ)

(ಇ) **ಅರ್ಜಿ ಸಲ್ಲಿಸುವ ವಿಧಾನ:**

ಭರ್ತಿ ಮಾಡಿದ ಅರ್ಜಿಗಳನ್ನು ಸಮೀಪದ 121 ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ "ಆನ್‌ಲೈನ್ ಅರ್ಜಿಗಳ ಭರ್ತಿ/ದಾಖಲೆಗಳ ಪರಿಶೀಲನಾ ಕೇಂದ್ರ" (Online Application Submission / Document Verification Center)" ಕ್ಕೆ **ದಿನಾಂಕ: 27–06–2017** ರ ಒಳಗಾಗಿ ಎಲ್ಲಾ ಮೂಲ ದಾಖಲೆಗಳೊಂದಿಗೆ ಮತ್ತು ಒಂದು ಸೆಟ್ ಸ್ವಯಂ ದೃಡೀಕೃತ ಜೆರಾಕ್ಸ್ ಪ್ರತಿಗಳ ಸಹಿತ ಹಾಗೂ ಇತ್ತೀಚಿನ 04 ಪಾಸ್ ಪೋರ್ಟ್ ಅಳತೆಯ ಫೋಟೊಗಳೊಂದಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ತಾಂತ್ರಿಕ ಶಿಕ್ಷಣ ಇಲಾಖೆಯ ವೆಬ್‌ಸೈಟ್ www.dte.kar.nic.in ಮತ್ತು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್ www.kea.kar.nic.in ಅನ್ನು ನೋಡಲು ಪ್ರಕಟಣೆ ತಿಳಿಸಿದೆ.

# ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಜೂನ್ 23 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 25-06-2017ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ **ಶ್ರೀಮತಿ. ಲಕ್ಷ್ಮಮ್ಮ ಮತ್ತು ತಂಡ ತಗಚಗೆರೆ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ ರವರಿಂದ ಸೊಬಾನೆ ಪದ ಮತ್ತು ಜಾನಪದ ಗೀತೆ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2) ಸಂಜೆ 04.00 ಗಂಟೆಯಿಂದ ಸಂಜೆ 05.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ ಶ್ರೀ. **ಭೀಮಾ ಶಂಕರ್ ಮತ್ತು ತಂಡ ಕಡಗಂಚಿ, ಆಳಂದ ತಾಲ್ಲೂಕು, ಗುಲ್ಬರ್ಗಾ ಜಿಲ್ಲೆ ರವರಿಂದ ತತ್ವ ಪದ ಮತ್ತು ಜನಪದ ಗೀತೆ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

4) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಕುಮಾರಿ. ಶ್ರದ್ಧಾ ನಾಗರಾಜ್ ಮತ್ತು ತಂಡ** ರವರಿಂದ **ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ **ಶ್ರೀವಾಣಿ ವಿದ್ಯಾ ಕೇಂದ್ರ, ಮಾಚೋಹಳ್ಳಿ , ಬೆಂಗಳೂರು ಶಾಲಾ ವಿದ್ಯಾರ್ಥಿಗಳಿಂದ ಹಾಡುಗಾರಿಕೆ ಸಂಗೀತ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.
- ಬೆಳಿಗ್ಗೆ 9.00 ಗಂಟೆಯಿಂದ 10.00 ಗಂಟೆಯವರೆಗೆ **ಶ್ರೀ.ಎಸ್.ವಿಕಾಸ್** ರವರಿಂದ **ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

**II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- ಬೆಳಿಗ್ಗೆ 6.30 ರಿಂದ ಬೆಳಿಗ್ಗೆ 10.00 ಗಂಟೆಯವರೆಗೆ ದಿ ಹಿಂದೂ ಗ್ರೂಪ್ ವತಿಯಿಂದ **"ಸೈಕಲ್ ಡೇ"** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಜುಂಬಾ, ಯೋಗಾ, ಸೈಕಲ್ ರ್‍ಯಾಲಿ, ಓದುವ ಜೋನ್ ಹಾಗೂ ಇನ್ನಿತರೇ ಮನರಂಜನೆ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ.